# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 485 |
| ಸದಸ್ಯರ ಹೆಸರು | : | ಶ್ರೀ ಎಂ.ಎಲ್ ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 22-12-2022 |
| ಉತ್ತರಿಸುವವರು | : | ಸನ್ಮಾನ್ಯ ಮುಖ್ಯಮಂತ್ರಿಯವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯ ವ್ಯಾಪ್ತಿಯಲ್ಲಿ ಕಾಡುಪ್ರಾಣಿಗಳು ರೈತರು ಬೆಳೆದ ಬೆಳೆಗಳನ್ನು ಸಂಪೂರ್ಣವಾಗಿ ನಾಶ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರವು ಕಾಡುಪ್ರಾಣಿಗಳ ಉಪಟಳವನ್ನು ತಡೆಯಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ; (ಸಂಪೂರ್ಣವಾದ ಮಾಹಿತಿ ನೀಡುವುದು) | ಹೌದು, ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ವನ್ಯಪ್ರಾಣಿಗಳ ಹಾವಳಿ ತಡೆಗಟ್ಟಲು ಕೈಗೊಂಡಿರುವ ಕ್ರಮಗಳು ಈ ಕೆಳಕಂಡಂತಿದೆ:-<br><br>1. ವನ್ಯಪ್ರಾಣಿಗಳು ಕಾಡಿನಿಂದ ನಾಡಿಗೆ ಆಹಾರ ಮತ್ತು ನೀರನ್ನು ಅರಸಿ ನಾಡಿಗೆ ಬಾರದಂತೆ ಅರಣ್ಯದಲ್ಲಿರುವ ಕೆರೆಗಳಲ್ಲಿ ನೀರು ಸಂಗ್ರಹಣೆಗಾಗಿ ಹೂಳೆತ್ತುವುದು. ಕಾಡಿನಲ್ಲಿ ನೀರಿನ ಹೊಂಡಗಳನ್ನು ಮತ್ತು ಸಿಮೆಂಟ್ ತೊಟ್ಟಿಗಳನ್ನು ನಿರ್ಮಿಸಲಾಗಿದೆ.<br>2. ವನ್ಯಪ್ರಾಣಿಗಳು ಆಹಾರಕ್ಕಾಗಿ ಕಾಡಿನಿಂದ ನಾಡಿಗೆ ಬಾರದಂತೆ ಕಾಡಿನಲ್ಲಿ Non Timber Forest Product ಯೋಜನೆಯಡಿ ವನ್ಯಪ್ರಾಣಿಗಳಿಗೆ ಆಹಾರದ ನೆಡುತೋಪುಗಳನ್ನು ನಿರ್ಮಿಸಲಾಗಿದೆ.<br>3. ವನ್ಯಪ್ರಾಣಿಗಳ ಆವಾಸಸ್ಥಾನದ ಅಭಿವೃದ್ಧಿಪಡಿಸಲಾಗುತ್ತಿದೆ.<br>4. ವನ್ಯಪ್ರಾಣಿಗಳ ಬಗ್ಗೆ ಸಾರ್ವಜನಿಕರಿಗೆ / ಕಾಡಿನಂಚಿನ ಗ್ರಾಮಸ್ಥರಿಗೆ ಅರಿವು ಮೂಡಿಸುವ ಸಲುವಾಗಿ ಭಿತ್ತಿ ಚಿತ್ರಗಳ ಮೂಲಕ / ಬೀದಿನಾಟಕಗಳ ಮೂಲಕ ಅರಿವು ಮೂಡಿಸಲಾಗುತ್ತಿದೆ.<br>5. ವನ್ಯಪ್ರಾಣಿಗಳಿಂದ ರೈತರಿಗೆ ಮತ್ತು ಸಾರ್ವಜನಿಕರಿಗೆ ಆಗುವ ಉಪಟಳವನ್ನು ನಿಯಂತ್ರಿಸಲು ಮುನ್ನೆಚ್ಚರಿಕೆ ಕ್ರಮವಾಗಿ ಬೋನು ಇಟ್ಟು ವನ್ಯಪ್ರಾಣಿಗಳನ್ನು ಸೆರೆಹಿಡಿದು ಸೂಕ್ತ ಆವಾಸಸ್ಥಾನಕ್ಕೆ ಸ್ಥಳಾಂತರಿಸಲು ಕ್ರಮ ಕೈಗೊಳ್ಳಲಾಗಿದೆ.<br>6. ವನ್ಯಪ್ರಾಣಿಗಳು ಅರಣ್ಯ ಪ್ರದೇಶದಿಂದ ಹೊರಗಡೆ ಬಾರದಂತೆ ಅರಣ್ಯ ಗಡಿಗಳಲ್ಲಿ ತಂತಿಬೇಲಿ ನಿರ್ಮಾಣ ಮಾಡಲಾಗಿದೆ.<br>7. ಕಾಡಾನೆಗಳ ಹಾವಳಿಯನ್ನು ನಿಯಂತ್ರಿಸಲು ಸೋಲಾರ್ ಹ್ಯಾಂಗಿಂಗ್ ಫೆನ್ಸ್ ನಿರ್ಮಾಣ, ಕ್ಷಿಪ್ರ ಕಾರ್ಯಪಡೆ ವಾಹನ ಗಸ್ತು ಸಿಬ್ಬಂದಿ ನಿಯೋಜನೆ ಸೇರಿದಂತೆ ಮುಂತಾದ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. |

| ಕ್ರ ಸಂ | ವಿಭಾಗ | ತಾಲ್ಲೂಕು | ಮಾನವ ಹತ್ಯೆ / ಮಾರಣಾಂತಿಕ | | ವನ್ಯ ಪ್ರಾಣಿಗಳಿಂದ ಆದ ಮಾನವ ಗಾಯ | | ಜಾನುವಾರುಗಳ ಹತ್ಯೆ | | ಆಸ್ತಿಪಾಸ್ತಿ ಹಾನಿ | | ಬೆಳೆಗಳಿಗೆ ಆದ ಹಾನಿ | |
|---|---|---|---|---|---|---|---|---|---|---|---|---|
| | | | ಪ್ರಕರಣಗಳು (ಸಂಖ್ಯೆ ಗಳಲ್ಲಿ) | ಮೊತ್ತ (ಲಕ್ಷಗಳಲ್ಲಿ) | ಪ್ರಕರಣಗಳು (ಸಂಖ್ಯೆ ಗಳಲ್ಲಿ) | ಮೊತ್ತ (ಲಕ್ಷಗಳಲ್ಲಿ) | ಪ್ರಕರಣಗಳು (ಸಂಖ್ಯೆ ಗಳಲ್ಲಿ) | ಮೊತ್ತ (ಲಕ್ಷಗಳಲ್ಲಿ) | ಪ್ರಕರಣಗಳು (ಸಂಖ್ಯೆ ಗಳಲ್ಲಿ) | ಮೊತ್ತ (ಲಕ್ಷಗಳಲ್ಲಿ) | ಪ್ರಕರಣಗಳು (ಸಂಖ್ಯೆ ಗಳಲ್ಲಿ) | ಮೊತ್ತ (ಲಕ್ಷಗಳಲ್ಲಿ) |
| | | | | | | 2020-21 | | | | | | |
| 1 | ಚಿಕ್ಕಬಳ್ಳಾಪುರ | ಚಿಕ್ಕಬಳ್ಳಾಪುರ | - | - | - | - | 12 | 380,000 | - | - | - | |
| | | ಗೌರಿಬಿದನೂರು | - | - | - | - | 13 | 100,000 | - | - | | |
| | | ಗುಡಿಬಂಡೆ | - | - | - | - | 1 | 5,000 | - | - | 6 | 33,254 |
| | | ಚಿಂತಾಮಣಿ | - | - | - | - | 3 | 35,000 | - | - | 1 | 24,862 |
| | | ಬಾಗೇಪಲ್ಲಿ | - | - | 1 | 30,000 | 1 | 25,000 | - | - | 2 | 13,952 |
| | | ಶಿಡ್ಲಘಟ್ಟ | - | - | - | - | 1 | 40,000 | - | - | 6 | 24,750 |
| | | ಒಟ್ಟು | - | - | 1 | 30,000 | 31 | 585,000.00 | - | - | 15 | 98,718.00 |
| | | | | | | 2021-22 | | | | | | |
| 1 | ಚಿಕ್ಕಬಳ್ಳಾಪುರ | ಚಿಕ್ಕಬಳ್ಳಾಪುರ | - | - | - | - | 16 | 145,000 | - | - | - | - |
| | | ಗೌರಿಬಿದನೂರು | - | - | - | - | 12 | 90,000 | - | - | 1 | 8,710.00 |
| | | ಗುಡಿಬಂಡೆ | - | - | - | - | 1 | 85,000 | - | - | 11 | 112,887 |
| | | ಚಿಂತಾಮಣಿ | - | - | - | - | 3 | 30,000 | - | - | 1 | 24,852 |
| | | ಬಾಗೇಪಲ್ಲಿ | - | - | - | - | - | - | - | - | 2 | 13,552 |
| | | ಶಿಡ್ಲಘಟ್ಟ | - | - | - | - | - | - | - | - | 6 | 24,750 |
| | | ಒಟ್ಟು | - | - | - | - | 32 | 350,000.00 | - | - | 21 | 184,561 |
| | | ಒಟ್ಟು | - | - | 1 | 30,000 | 69 | 985,000 | - | - | 43 | 429,219 |

## ಅನುಬಂಧ - 2.

### ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ವನ್ಯಪ್ರಾಣಿಗಳ ದಾಳಿಯಿಂದ ಉಂಟಾಗುವ ಮಾನವ-ಪ್ರಾಣ ಹಾನಿ, ಶಾಶ್ವತ ಅಂಗವಿಕಲತೆ, ಭಾಗಶಃ ಶಾಶ್ವತ ಅಂಗವಿಕಲತೆ, ಗಾಯಗೊಂಡವರಿಗೆ, ಆಸ್ತಿ-ಪಾಸ್ತಿ ನಷ್ಟ ಪ್ರಕರಣಗಳಿಗೆ ಪಾವತಿಸುತ್ತಿರುವ ಪರಿಹಾರ ಧನವನ್ನು ಪರಿಷ್ಕರಿಸುವ ಬಗ್ಗೆ.

**ಓದಲಾಗಿದೆ:** (1) ಸರ್ಕಾರದ ಆದೇಶ ಸಂಖ್ಯೆ:ಅಪಜೀ-143-ಎಫ್‌ಡಬ್ಲ್ಯೂಎಲ್-2010, ದಿನಾಂಕ: 30/04/2011 ಮತ್ತು 03/08/2011.

(2) ಸರ್ಕಾರದ ಆದೇಶ ಸಂಖ್ಯೆ:ಅಪಜೀ 130 ಎಫ್‌ಡಬ್ಲ್ಯೂಎಲ್ 2016, ದಿನಾಂಕ:19/09/2016.

(3) ಸರ್ಕಾರದ ಆದೇಶ ಸಂಖ್ಯೆ:ಅಪಜೀ 61 ಎಫ್‌ಎಪಿ 2018, ಬೆಂಗಳೂರು, ದಿನಾಂಕ:16/10/2018.

(4) ಸರ್ಕಾರದ ಆದೇಶ ಸಂಖ್ಯೆ:ಅಪಜೀ 66 ಎಫ್‌ಡಬ್ಲ್ಯೂಎಲ್ 2019, ದಿನಾಂಕ:07/01/2020

(5) ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ) ಬೆಂಗಳೂರು ಇವರ ಪತ್ರ ಸಂಖ್ಯೆ:ಪ್ರಮುಅಸಂ(ವಜೀ)/ಸಿ2/ಸಿಆರ್-37/2011-12

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರಿಂದ (4) ವರೆಗಿನ ಸರ್ಕಾರದ ಆದೇಶಗಳಲ್ಲಿ ಕಾಡು ಪ್ರಾಣಿಗಳ ಹಾವಳಿಯಿಂದ ಬೆಳೆನಾಶ, ಮಾನವ ಪ್ರಾಣಹಾನಿ, ಶಾಶ್ವತ ಅಂಗವಿಕಲತೆ, ಸಾಕು ಪ್ರಾಣಿಗಳ ಪ್ರಾಣಹಾನಿ, ಆಸ್ತಿಪಾಸ್ತಿ ಹಾನಿ ಹಾಗೂ ಗಾಯಗೊಂಡವರಿಗೆ ನೀಡಲಾಗುತ್ತಿರುವ ಪರಿಹಾರದ ಪ್ರಕರಣಗಳಿಗೆ ಸಂಬಂಧಿಸಿದಂತೆ ಪಾವತಿಸುತ್ತಿರುವ ದಯಾತ್ಮಕ ಧನವನ್ನು ಕಾಲಕಾಲಕ್ಕೆ ಪರಿಷ್ಕರಿಸಿ ಆದೇಶ ಹೊರಡಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (5) ರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ) ರವರ ಪ್ರಸ್ತಾವನೆಯಲ್ಲಿ ಸನ್ಮಾನ್ಯ ಮುಖ್ಯ ಮಂತ್ರಿಗಳು 2022-23ನೇ ಸಾಲಿನ ಸೆಪ್ಟೆಂಬರ್ ಮಾಹೆಯಲ್ಲಿ ನಡೆದ ಅಧಿವೇಶನದಲ್ಲಿ ದಿನಾಂಕ:21/09/2022 ರಂದು ವನ್ಯಪ್ರಾಣಿ ದಾಳಿಯಿಂದ ಉಂಟಾದ ಮಾನವ-ಪ್ರಾಣ ಹಾನಿ ಪ್ರಕರಣಗಳಲ್ಲಿ ಪ್ರಸ್ತುತ ಪಾವತಿಸಲಾಗುತ್ತಿರುವ ಪರಿಹಾರ ಧನವನ್ನು ದುಪ್ಪಟ್ಟು ಮಾಡುವುದಾಗಿ ಘೋಷಿಸಿರುವುದಾಗಿ ಮತ್ತು ಅದರಂತೆ ಪರಿಹಾರ ಧನವನ್ನು ಪರಿಷ್ಕರಿಸಲು ಕೋರಿರುತ್ತಾರೆ.

...2

ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಅಪಜೀ 114 ಎಫ್‌ಡಬ್ಲ್ಯೂಎಲ್ 2022, ಬೆಂಗಳೂರು. ದಿನಾಂಕ:15-12-2022.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ವನ್ಯಪ್ರಾಣಿಗಳ ದಾಳಿಯಿಂದ ಉಂಟಾಗುವ ಮಾನವ-ಪ್ರಾಣ ಹಾನಿ, ಶಾಶ್ವತ ಅಂಗವಿಕಲತೆ, ಭಾಗಶಃ ಶಾಶ್ವತ ಅಂಗವಿಕಲತೆ, ಗಾಯಗೊಂಡವರಿಗೆ, ಆಸ್ತಿ-ಪಾಸ್ತಿ ನಷ್ಟ ಪ್ರಕರಣಗಳಲ್ಲಿ ಈ ಹಿಂದಿನ ಆದೇಶಗಳನ್ವಯ ನೀಡುತ್ತಿರುವ ಪರಿಹಾರ ಧನ ಮತ್ತು ಮಾಶಾಸನ ಧನವನ್ನು ಪರಿಷ್ಕರಿಸಿ ಈ ಕೆಳಕಂಡಂತೆ ನಿಗಧಿಪಡಿಸಿ ಆದೇಶಿಸಲಾಗಿದೆ.

| ಕ್ರ.ಸಂ | ಪ್ರಕರಣಗಳ ವಿವರ | ಪ್ರಸ್ತುತ ನೀಡಲಾಗುತ್ತಿರುವ ದಯಾತ್ಮಕ ಧನ | ನಿಗಧಿಪಡಿಸಲಾದ ದಯಾತ್ಮಕ ಧನ |
|---|---|---|---|
| 1 | ವನ್ಯಪ್ರಾಣಿಗಳ ದಾಳಿಯಿಂದ ಉಂಟಾಗುವ ಮಾನವ-ಪ್ರಾಣ ಹಾನಿ ಪ್ರಕರಣಗಳು | ರೂ.7.50 ಲಕ್ಷ (ಏಳು ಲಕ್ಷ ಐವತ್ತು ಸಾವಿರಗಳು ರೂಪಾಯಿ) | ರೂ.15.00 ಲಕ್ಷ (ಹದಿನೈದು ಲಕ್ಷ ರೂಪಾಯಿ) |
| 2 | ಕಾಡುಪ್ರಾಣಿಯಿಂದ ಉಂಟಾಗುವ ಶಾಶ್ವತ ಅಂಗವಿಕಲತೆ ಪ್ರಕರಣಗಳು | ರೂ.5.00 ಲಕ್ಷ (ಐದು ಲಕ್ಷ ರೂಪಾಯಿ) | ರೂ.10.00 ಲಕ್ಷ (ಹತ್ತು ಲಕ್ಷ ರೂಪಾಯಿ) |
| 3 | ಕಾಡುಪ್ರಾಣಿಯಿಂದ ಉಂಟಾಗುವ ಭಾಗಶಃ ಶಾಶ್ವತ ಅಂಗವಿಕಲತೆ ಪ್ರಕರಣಗಳು | ರೂ.2.50 ಲಕ್ಷ (ಎರಡು ಲಕ್ಷ ಐವತ್ತು ಸಾವಿರ ರೂಪಾಯಿ) | ರೂ.5.00ಲಕ್ಷ (ಐದು ಲಕ್ಷ ರೂಪಾಯಿ) |
| 4 | ಕಾಡುಪ್ರಾಣಿಗಳಿಂದ ಗಾಯಗೊಂಡ ಪ್ರತಿ ವ್ಯಕ್ತಿಗೆ ಗರಿಷ್ಟ ಮೊತ್ತ ಪ್ರಕರಣಗಳು | ರೂ30,000/- (ಮೂವತ್ತು ಸಾವಿರ ರೂಪಾಯಿ) | ರೂ.60,000/- (ಅರವತ್ತು ಸಾವಿರ ರೂಪಾಯಿ) |
| 5 | ಕಾಡಾನೆ ದಾಳಿಯಿಂದ ಉಂಟಾದ ಆಸ್ತಿ ನಷ್ಟ ಪ್ರತಿ ಪ್ರಕರಣಕ್ಕೆ | ರೂ. 10,000/- (ಹತ್ತು ಸಾವಿರ ರೂಪಾಯಿ) | ರೂ.20,000/- (ಇಪತ್ತು ಸಾವಿರ ರೂಪಾಯಿ) |
| 6 | **ಮಾಸಾಶನ**: ವನ್ಯಪ್ರಾಣಿಗಳ ದಾಳಿ / ಹಾವಳಿಯಿಂದ ಉಂಟಾಗುವ ಮಾನವ-ಪ್ರಾಣ ಹಾನಿ ಪ್ರಕರಣಗಳಲ್ಲಿ ಮೃತಪಟ್ಟ ವ್ಯಕ್ತಿಗಳ ಕುಟುಂಬಕ್ಕೆ ಹಾಗೂ ಶಾಶ್ವತ ಅಂಗವಿಕಲತೆಗೊಳಗಾದ ವ್ಯಕ್ತಿಗಳಿಗೆ ನೀಡುತ್ತಿರುವ ಧಯಾತ್ಮಕ ಧನದ ಜೊತೆಗೆ ಪ್ರತೀ ತಿಂಗಳಂತೆ 5 ವರ್ಷಗಳ ವರೆಗೆ ಮಾಸಾಶನ | ರೂ.2000/- (ಎರಡು ಸಾವಿರ ರೂಪಾಯಿ) | ರೂ.4,000/- (ಐದು ಸಾವಿರ ರೂಪಾಯಿ) |

...3

ಈ ದಯಾತ್ಮಕ ಧನ ಪಾವತಿಗೆ ಸಂಬಂಧಿಸಿದಂತೆ ಈಗಾಗಲೇ ಮೇಲೆ ಓದಲಾಗಿರುವ ಸರ್ಕಾರಿ ಆದೇಶಗಳಲ್ಲಿ ನಿರ್ದಿಷ್ಟಪಡಿಸಿರುವ ಷರತ್ತು ಮತ್ತು ನಿಬಂಧನೆಗಳು ಯಾವುದೇ ಬದಲಾವಣೆ ಇಲ್ಲದೆ ಮುಂದುವರೆಯುತ್ತವೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 696 ವೆಚ್ಚ-5/2022, ದಿನಾಂಕ:14/12/2022ರಲ್ಲಿ ನೀಡಿದ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಶಂಕರ ಎಸ್)** 15/12/22
ಸರ್ಕಾರದ ಜಂಟಿ ಕಾರ್ಯದರ್ಶಿ-2
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ
15/12/22

**ಇವರಿಗೆ,**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಹಾಗೂ ಈ ಆದೇಶದ 500 ಪ್ರತಿಗಳನ್ನು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ), ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು-560003 ಇವರಿಗೆ ಹಾಗೂ 250 ಪ್ರತಿಗಳನ್ನು ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ, #432, 4ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು, ಇಲ್ಲಿಗೆ ಒದಗಿಸುವಂತೆ ಕೋರಿದೆ.

**ಪ್ರತಿಗಳು:**

1. ಪ್ರಧಾನ ಮಹಾಲೇಖಪಾಲರು, (ಲೆಕ್ಕಪತ್ರ / ಲೆಕ್ಕಪರಿಶೋಧನೆ) ಕರ್ನಾಟಕ, ಬೆಂಗಳೂರು.
2. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು), ಅರಣ್ಯಭವನ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು 560003.
3. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ), ಅರಣ್ಯಭವನ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು 560003.
4. ಎಲ್ಲಾ ಅಪರ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು / ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು / ಅರಣ್ಯ ಸಂರಕ್ಷಣಾಧಿಕಾರಿಗಳು / ಉಪ ಅರಣ್ಯ ಸಂರಕ್ಷಣಾಧಿಕಾರಿಗಳು (ಪ್ರಾದೇಶಿಕ / ವನ್ಯಜೀವಿ) / ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು (ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ) ಬೆಂಗಳೂರು ಇವರ ಮುಖಾಂತರ)
5. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-5), ವಿಧಾನಸೌಧ, ಬೆಂಗಳೂರು.
7. ಶಾಖಾ ರಕ್ಷ ಕಡತ/ಹೆಚ್ಚುವರಿ ಪ್ರತಿಗಳು.

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ವನ್ಯಪ್ರಾಣಿಗಳ ದಾಳಿಯಿಂದ ಉಂಟಾಗುವ ಮಾನವ-ಪ್ರಾಣ ಹಾನಿ, ಶಾಶ್ವತ ಅಂಗವಿಕಲತೆ, ಭಾಗಶಃ ಶಾಶ್ವತ ಅಂಗವಿಕಲತೆ, ಗಾಯಗೊಂಡವರಿಗೆ, ಆಸ್ತಿ-ಪಾಸ್ತಿ ನಷ್ಟ ಪ್ರಕರಣಗಳಿಗೆ ಪಾವತಿಸುತ್ತಿರುವ ಪರಿಹಾರ ಧನವನ್ನು ಪರಿಷ್ಕರಿಸುವ ಬಗ್ಗೆ.

**ಓದಲಾಗಿದೆ:** (1) ಸರ್ಕಾರದ ಆದೇಶ ಸಂಖ್ಯೆ:ಅಪಜೀ-143-ಎಫ್‌ಡಬ್ಲ್ಯೂಎಲ್-2010, ದಿನಾಂಕ: 30/04/2011 ಮತ್ತು 03/08/2011.

(2) ಸರ್ಕಾರದ ಆದೇಶ ಸಂಖ್ಯೆ:ಅಪಜೀ 130 ಎಫ್‌ಡಬ್ಲ್ಯೂಎಲ್ 2016, ದಿನಾಂಕ:19/09/2016.

(3) ಸರ್ಕಾರದ ಆದೇಶ ಸಂಖ್ಯೆ:ಅಪಜೀ 61 ಎಫ್‌ಎಪಿ 2018, ಬೆಂಗಳೂರು, ದಿನಾಂಕ:16/10/2018.

(4) ಸರ್ಕಾರದ ಆದೇಶ ಸಂಖ್ಯೆ:ಅಪಜೀ 66 ಎಫ್‌ಡಬ್ಲ್ಯೂಎಲ್ 2019, ದಿನಾಂಕ:07/01/2020

(5) ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ) ಬೆಂಗಳೂರು ಇವರ ಪತ್ರ ಸಂಖ್ಯೆ:ಪ್ರಮುಅಸಂ(ವಜೀ)/ಸಿ2/ಸಿಆರ್-37/2011-12

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರಿಂದ (4) ವರೆಗಿನ ಸರ್ಕಾರದ ಆದೇಶಗಳಲ್ಲಿ ಕಾಡು ಪ್ರಾಣಿಗಳ ಹಾವಳಿಯಿಂದ ಬೆಳೆನಾಶ, ಮಾನವ ಪ್ರಾಣಹಾನಿ, ಶಾಶ್ವತ ಅಂಗವಿಕಲತೆ, ಸಾಕು ಪ್ರಾಣಿಗಳ ಪ್ರಾಣಹಾನಿ, ಆಸ್ತಿಪಾಸ್ತಿ ಹಾನಿ ಹಾಗೂ ಗಾಯಗೊಂಡವರಿಗೆ ನೀಡಲಾಗುತ್ತಿರುವ ಪರಿಹಾರದ ಪ್ರಕರಣಗಳಿಗೆ ಸಂಬಂಧಿಸಿದಂತೆ ಪಾವತಿಸುತ್ತಿರುವ ದಯಾತ್ಮಕ ಧನವನ್ನು ಕಾಲಕಾಲಕ್ಕೆ ಪರಿಷ್ಕರಿಸಿ ಆದೇಶ ಹೊರಡಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (5) ರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ) ರವರ ಪ್ರಸ್ತಾವನೆಯಲ್ಲಿ ಸನ್ಮಾನ್ಯ ಮುಖ್ಯ ಮಂತ್ರಿಗಳು 2022-23ನೇ ಸಾಲಿನ ಸೆಪ್ಟೆಂಬರ್ ಮಾಹೆಯಲ್ಲಿ ನಡೆದ ಅಧಿವೇಶನದಲ್ಲಿ ದಿನಾಂಕ:21/09/2022 ರಂದು ವನ್ಯಪ್ರಾಣಿ ದಾಳಿಯಿಂದ ಉಂಟಾದ ಮಾನವ-ಪ್ರಾಣ ಹಾನಿ ಪ್ರಕರಣಗಳಲ್ಲಿ ಪ್ರಸ್ತುತ ಪಾವತಿಸಲಾಗುತ್ತಿರುವ ಪರಿಹಾರ ಧನವನ್ನು ದುಪ್ಪಟ್ಟು ಮಾಡುವುದಾಗಿ ಘೋಷಿಸಿರುವುದಾಗಿ ಮತ್ತು ಅದರಂತೆ ಪರಿಹಾರ ಧನವನ್ನು ಪರಿಷ್ಕರಿಸಲು ಕೋರಿರುತ್ತಾರೆ.

...2

ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಅಪಜೀ 114 ಎಫ್‌ಡಬ್ಲ್ಯೂಎಲ್ 2022,**
**ಬೆಂಗಳೂರು. ದಿನಾಂಕ:15-12-2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ವನ್ಯಪ್ರಾಣಿಗಳ ದಾಳಿಯಿಂದ ಉಂಟಾಗುವ ಮಾನವ-ಪ್ರಾಣ ಹಾನಿ, ಶಾಶ್ವತ ಅಂಗವಿಕಲತೆ, ಭಾಗಶಃ ಶಾಶ್ವತ ಅಂಗವಿಕಲತೆ, ಗಾಯಗೊಂಡವರಿಗೆ, ಆಸ್ತಿ-ಪಾಸ್ತಿ ನಷ್ಟ ಪ್ರಕರಣಗಳಲ್ಲಿ ಈ ಹಿಂದಿನ ಆದೇಶಗಳನ್ವಯ ನೀಡುತ್ತಿರುವ ಪರಿಹಾರ ಧನ ಮತ್ತು ಮಾಶಾಸನ ಧನವನ್ನು ಪರಿಷ್ಕರಿಸಿ ಈ ಕೆಳಕಂಡಂತೆ ನಿಗಧಿಪಡಿಸಿ ಆದೇಶಿಸಲಾಗಿದೆ.

| ಕ್ರ.ಸಂ | ಪ್ರಕರಣಗಳ ವಿವರ | ಪ್ರಸ್ತುತ ನೀಡಲಾಗುತ್ತಿರುವ ದಯಾತ್ಮಕ ಧನ | ನಿಗಧಿಪಡಿಸಲಾದ ದಯಾತ್ಮಕ ಧನ |
|---|---|---|---|
| 1 | ವನ್ಯಪ್ರಾಣಿಗಳ ದಾಳಿಯಿಂದ ಉಂಟಾಗುವ ಮಾನವ-ಪ್ರಾಣ ಹಾನಿ ಪ್ರಕರಣಗಳು | ರೂ.7.50 ಲಕ್ಷ (ಏಳು ಲಕ್ಷ ಐವತ್ತು ಸಾವಿರಗಳು ರೂಪಾಯಿ) | ರೂ.15.00 ಲಕ್ಷ (ಹದಿನೈದು ಲಕ್ಷ ರೂಪಾಯಿ) |
| 2 | ಕಾಡುಪ್ರಾಣಿಯಿಂದ ಉಂಟಾಗುವ ಶಾಶ್ವತ ಅಂಗವಿಕಲತೆ ಪ್ರಕರಣಗಳು | ರೂ.5.00 ಲಕ್ಷ (ಐದು ಲಕ್ಷ ರೂಪಾಯಿ) | ರೂ.10.00 ಲಕ್ಷ (ಹತ್ತು ಲಕ್ಷ ರೂಪಾಯಿ) |
| 3 | ಕಾಡುಪ್ರಾಣಿಯಿಂದ ಉಂಟಾಗುವ ಭಾಗಶಃ ಶಾಶ್ವತ ಅಂಗವಿಕಲತೆ ಪ್ರಕರಣಗಳು | ರೂ.2.50 ಲಕ್ಷ (ಎರಡು ಲಕ್ಷ ಐವತ್ತು ಸಾವಿರ ರೂಪಾಯಿ) | ರೂ.5.00ಲಕ್ಷ (ಐದು ಲಕ್ಷ ರೂಪಾಯಿ) |
| 4 | ಕಾಡುಪ್ರಾಣಿಗಳಿಂದ ಗಾಯಗೊಂಡ ಪ್ರತಿ ವ್ಯಕ್ತಿಗೆ ಗರಿಷ್ಟ ಮೊತ್ತ ಪ್ರಕರಣಗಳು | ರೂ30,000/- (ಮೂವತ್ತು ಸಾವಿರ ರೂಪಾಯಿ) | ರೂ.60,000/- (ಅರವತ್ತು ಸಾವಿರ ರೂಪಾಯಿ) |
| 5 | ಕಾಡಾನೆ ದಾಳಿಯಿಂದ ಉಂಟಾದ ಆಸ್ತಿ ನಷ್ಟ ಪ್ರತಿ ಪ್ರಕರಣಕ್ಕೆ | ರೂ. 10,000/- (ಹತ್ತು ಸಾವಿರ ರೂಪಾಯಿ) | ರೂ.20,000/- (ಇಪತ್ತು ಸಾವಿರ ರೂಪಾಯಿ) |
| 6 | **ಮಾಸಾಶನ**: ವನ್ಯಪ್ರಾಣಿಗಳ ದಾಳಿ / ಹಾವಳಿಯಿಂದ ಉಂಟಾಗುವ ಮಾನವ-ಪ್ರಾಣ ಹಾನಿ ಪ್ರಕರಣಗಳಲ್ಲಿ ಮೃತಪಟ್ಟ ವ್ಯಕ್ತಿಗಳ ಕುಟುಂಬಕ್ಕೆ ಹಾಗೂ ಶಾಶ್ವತ ಅಂಗವಿಕಲತೆಗೊಳಗಾದ ವ್ಯಕ್ತಿಗಳಿಗೆ ನೀಡುತ್ತಿರುವ ಧಯಾತ್ಮಕ ಧನದ ಜೊತೆಗೆ ಪ್ರತೀ ತಿಂಗಳಂತೆ 5 ವರ್ಷಗಳ ವರೆಗೆ ಮಾಸಾಶನ | ರೂ.2000/- (ಎರಡು ಸಾವಿರ ರೂಪಾಯಿ) | ರೂ.4,000/- (ಐದು ಸಾವಿರ ರೂಪಾಯಿ) |

ಈ ದಯಾತ್ಮಕ ಧನ ಪಾವತಿಗೆ ಸಂಬಂಧಿಸಿದಂತೆ ಈಗಾಗಲೇ ಮೇಲೆ ಓದಲಾಗಿರುವ ಸರ್ಕಾರಿ ಆದೇಶಗಳಲ್ಲಿ ನಿರ್ದಿಷ್ಟಪಡಿಸಿರುವ ಷರತ್ತು ಮತ್ತು ನಿಬಂಧನೆಗಳು ಯಾವುದೇ ಬದಲಾವಣೆ ಇಲ್ಲದೆ ಮುಂದುವರೆಯುತ್ತವೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 696 ವೆಚ್ಚ-5/2022, ದಿನಾಂಕ:14/12/2022ರಲ್ಲಿ ನೀಡಿದ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಶಂಕರ ಎಸ್)** 15/12/22
ಸರ್ಕಾರದ ಜಂಟಿ ಕಾರ್ಯದರ್ಶಿ-2
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ
15/12/22

**ಇವರಿಗೆ,**
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಹಾಗೂ ಈ ಆದೇಶದ 500 ಪ್ರತಿಗಳನ್ನು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ), ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು-560003 ಇವರಿಗೆ ಹಾಗೂ 250 ಪ್ರತಿಗಳನ್ನು ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ, #432, 4ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು, ಇಲ್ಲಿಗೆ ಒದಗಿಸುವಂತೆ ಕೋರಿದೆ.

**ಪ್ರತಿಗಳು:**

1. ಪ್ರಧಾನ ಮಹಾಲೇಖಪಾಲರು, (ಲೆಕ್ಕಪತ್ರ / ಲೆಕ್ಕಪರಿಶೋಧನೆ) ಕರ್ನಾಟಕ, ಬೆಂಗಳೂರು.
2. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು), ಅರಣ್ಯಭವನ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು 560003.
3. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ), ಅರಣ್ಯಭವನ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು 560003.
4. ಎಲ್ಲಾ ಅಪರ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು / ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು / ಅರಣ್ಯ ಸಂರಕ್ಷಣಾಧಿಕಾರಿಗಳು / ಉಪ ಅರಣ್ಯ ಸಂರಕ್ಷಣಾಧಿಕಾರಿಗಳು (ಪ್ರಾದೇಶಿಕ / ವನ್ಯಜೀವಿ) / ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು (ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ) ಬೆಂಗಳೂರು ಇವರ ಮುಖಾಂತರ)
5. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-5), ವಿಧಾನಸೌಧ, ಬೆಂಗಳೂರು.
7. ಶಾಖಾ ರಕ್ಷ ಕಡತ/ಹೆಚ್ಚುವರಿ ಪ್ರತಿಗಳು.

# ಕರ್ನಾಟಕ ಸರ್ಕಾರ

ಇ-ಸಂಖ್ಯೆ: ಅಪಜೀ 114 ಎಫ್ ಡಬ್ಲ್ಯೂಎಲ್ 2022

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:16-12-2022.

## ತಿದ್ದುಪಡಿ

ಸರ್ಕಾರದ ಆದೇಶ ಸಂಖ್ಯೆ:ಅಪಜೀ 114 ಎಫ್‌ಡಬ್ಲ್ಯೂಎಲ್ 2022, ದಿನಾಂಕ:15-12-2022ರ ಆದೇಶ ಭಾಗದ ಕೋಷ್ಟಕದಲ್ಲಿನ ಕ್ರಮ ಸಂಖ್ಯೆ: (6) ರಲ್ಲಿನ ಕಲಂ (4) ರಲ್ಲಿ ನಿಗಧಿಪಡಿಸಲಾದ ಮಾಸಾಶನ ರೂ. 4,000/- (ಐದು ಸಾವಿರ ರೂಪಾಯಿ) ಎಂಬುದರ ಬದಲಾಗಿ **" ರೂ. 4,000/- (ನಾಲ್ಕು ಸಾವಿರ ರೂಪಾಯಿ)"** ಎಂದು ತಿದ್ದಿ ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಶಂಕರ ಎಸ್)** 16/12/22
ಸರ್ಕಾರದ ಜಂಟಿ ಕಾರ್ಯದರ್ಶಿ-2
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ
16/12/22

**ಇವರಿಗೆ,**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಹಾಗೂ ಈ ಆದೇಶದ 500 ಪ್ರತಿಗಳನ್ನು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ), ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು-560003 ಇವರಿಗೆ ಹಾಗೂ 250 ಪ್ರತಿಗಳನ್ನು ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ, #432, 4ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು, ಇಲ್ಲಿಗೆ ಒದಗಿಸುವಂತೆ ಕೋರಿದೆ.

**ಪ್ರತಿಗಳು:**

1. ಪ್ರಧಾನ ಮಹಾಲೇಖಪಾಲರು, (ಲೆಕ್ಕಪತ್ರ / ಲೆಕ್ಕಪರಿಶೋಧನೆ) ಕರ್ನಾಟಕ, ಬೆಂಗಳೂರು.
2. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು), ಅರಣ್ಯಭವನ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು 560003.
3. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ), ಅರಣ್ಯಭವನ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು 560003.

...2

4. ಎಲ್ಲಾ ಅಪರ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು / ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು / ಅರಣ್ಯ ಸಂರಕ್ಷಣಾಧಿಕಾರಿಗಳು / ಉಪ ಅರಣ್ಯ ಸಂರಕ್ಷಣಾಧಿಕಾರಿಗಳು (ಪ್ರಾದೇಶಿಕ / ವನ್ಯಜೀವಿ) / ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು (ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ) ಬೆಂಗಳೂರು ಇವರ ಮುಖಾಂತರ)
5. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-5), ವಿಧಾನಸೌಧ, ಬೆಂಗಳೂರು.
7. ಶಾಖಾ ರಕ್ಷ ಕಡತ/ಹೆಚ್ಚುವರಿ ಪ್ರತಿಗಳು.